ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಆ/ಯ.ಎ/ಆ.ಅ/೩೬ /2021-22

ಕಾರ್ಯಪಾಲಕ ಅಭಿಯಂತರರವರ ಕಛೇರಿ
ಯಲಹಂಕ ವಿಭಾಗ, ಬೃ.ಬೆಂ.ಮ.ಪಾ.
ಬೆಂಗಳೂರು 64 ದಿನಾಂಕ: ೧೧/೦೩/೨೦೨೨.

ಆಡಳಿತಾತ್ಮಕ ಅನುಮೋದನೆ ಟಪ್ಪಣಿ

ವಿಷಯ:- "Restoration and Improvements of roads M.S.Palya, Aishwarya Bakery road, Giridhamanagara and surrounding areas in ward no -03 of Yelahanka New town Sub division (PACKAGE NO-08)"

ಉಲ್ಲೇಖ:-1) ಸರ್ಕಾರದ ಆದೇಶ ಸಂಖ್ಯೆ:ನಆಇ 06 ಎಂ.ಎನ್.ವೈ2021 ಬೆಂಗಳೂರು ದಿ:29-04-2021
2) ಮುಖ್ಯಲೆಕ್ಕಾಧಿಕಾರಿಗಳವರ ಕಛೇರಿ ಕಾಮಗಾರಿ ಸಂಕೇತ:003-22-000009
3) ಸರ್ಕಾರಿ ಆದೇಶ ಸಂಖ್ಯೆ:ನಆಇ 212 ಎಂಎನ್‌ವೈ 2021 ಬೆಂಗಳೂರು ದಿ:10-02-2022

.....

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಯಲಹಂಕ ಉಪನಗರ ಉಪ ವಿಭಾಗ) ರವರು 2020-21ನೇ ಸಾಲಿನ ರಾಜ್ಯ ಆಯವ್ಯಯ ಘೋಷಣೆಯ ಕಂಡಿಕೆ 205 ರಲ್ಲಿ ಘೋಷಿಸಿರುವಂತೆ ಬಿ.ಬಿ.ಎಂ.ಪಿ. ವ್ಯಾಪ್ತಿಯ 110 ಹಳ್ಳಿಗಳ ರಸ್ತೆಗಳನ್ನು ಸಮಗ್ರವಾಗಿ ಪುನರ್ಜೀವನಗೊಳಿಸಲು ಸರ್ಕಾರದ ಆದೇಶ ಸಂಖ್ಯೆ:ನಆಇ 06 ಎಂ.ಎನ್.ವೈ2021 ಬೆಂಗಳೂರು ದಿನಾಂಕ:29-04-2021 ರಲ್ಲಿ GO SI No.258, 259 & 260ರಡಿ ಮಂಜೂರಾಗಿರುವ ಕಾಮಗಾರಿಗಳಿಗೆ 2018-19ನೇ ಸಾಲಿನ ಲೋಕೋಪಯೋಗಿ ಇಲಾಖೆಯ ಎಸ್.ಆರ್. ದರಪಟ್ಟಿಯನ್ವಯ ಮೇಲ್ಕಂಡ ಕಾಮಗಾರಿಗೆ ರೂ.1000.00 ಲಕ್ಷಗಳಿಗೆ ಅಂದಾಜುಪಟ್ಟಿ ತಯಾರಿಸಿದ್ದು, ಸದರಿ ಕಾಮಗಾರಿಗೆ ಕಾಮಗಾರಿ ಸಂಕೇತ:003-22-000009 ದೊರೆತಿರುತ್ತದೆ.

ಈ ಹಿನ್ನಲೆಯಲ್ಲಿ ಮೇಲ್ಕಂಡ ಕಾಮಗಾರಿಗೆ ಉಲ್ಲೇಖ(3)ರಲ್ಲಿ ಸರ್ಕಾರದ ಅಧೀನ ಕಾರ್ಯದರ್ಶಿಗಳು ನಗರಾಭಿವೃದ್ಧಿ ಇಲಾಖೆರವರು ಆಡಳಿತಾತ್ಮಕ ಅನುಮೋದನೆ ನೀಡಿರುತ್ತಾರೆ. ಆದರಂತೆ ಮೇಲ್ಕಂಡ ಕಾಮಗಾರಿಗೆ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2021-22 ದಿ:18-01-2022 ರಂತೆ ನೀಡಿರುವ ಅಧಿಕಾರದನ್ವಯ ಈ ಕೆಳಕಂಡ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ಮಟ ಸಂಖ್ಯೆ ೩೬೧ ಕ್ರ.ಸಂ ೩೬ ರಲ್ಲಿ ಆಡಳಿತಾತ್ಮಕ ಅನುಮೋದನೆ ಟಪ್ಪಣಿ ನೀಡಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
2. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ಕಯಾರಿಸಿ ಅನುಮೋದನೆ ಪಡೆಯುವುದು.
3. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಆಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
6. ಬಿ.ಎಂ./ಡಿ.ಸಿ. ಆಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
7. ಸದರಿ ಕೆಲಸವು ಎಂಡ್ಯಾಕ್‌ಮೆಂಟ್/ಕಾಂಕ್ರೀಟ್/ಡಾಂಬರೀಕರಣ-ಬಿಎಂ-ಡಿಸಿ/WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರು,
ಯಲಹಂಕ ವಿಭಾಗ
ಬಿ.ಬಿ.ಎಂ.ಪಿ ಬೆಂಗಳೂರು-64

ಪ್ರತಿಯನ್ನು:

1. ಮುಖ್ಯ ಅಧಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ ಕಳುಹಿಸಿದೆ.
3. ಕಛೇರಿ ಕಡತಕ್ಕೆ.

Scanned with CamScanner